# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣ ರಸ್ತೆ ಪರಿಮಿತಿಯಲ್ಲಿ ಬರುವ ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ 2016-17ನೇ ಸಾಲಿನಲ್ಲಿ ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಯೋಜನೆಗೆ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ:
1) ದಿನಾಂಕ:17-8-2016 ರಂದು ಜರುಗಿದ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ 401/2016.
2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:52:ಆರ್‌ಆರ್‌ಸಿ:2016 ದಿನಾಂಕ:26-08-2016.

**ಪ್ರಸ್ತಾವನೆ:**

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಹಿನ್ನೆಲೆಯಲ್ಲಿ ರಸ್ತೆ ಸುರಕ್ಷತೆ ಒದಗಿಸುವ ನಿಟ್ಟಿನಲ್ಲಿ ಗ್ರಾಮ ಪರಿಮಿತಿಯಲ್ಲಿ ಬರುವ ರಾಜ್ಯ / ರಾಷ್ಟ್ರ ಹೆದ್ದಾರಿಗಳಲ್ಲಿ ರಸ್ತೆ ಸುರಕ್ಷಾ ಕ್ರಮ ಕೈಗೊಳ್ಳಲಾಗುವುದು ಎಂದು 2016-17ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿರುತ್ತದೆ.

ಅದರಂತೆ ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಪ್ರತಿ ವರ್ಷಕ್ಕೆ ಅಂದಾಜು ಮೊತ್ತ ರೂ.50.00 ಕೋಟಿಯಂತೆ ಒಟ್ಟು 4 ವರ್ಷಗಳಿಗೆ ಒಟ್ಟಾರೆ ರೂ.200.00 ಕೋಟಿಗಳಿಗೆ (2016-17 ರಿಂದ 2019-2020ರವರೆಗೆ) ಪ್ರಾಸ್ತಾವಿಕ ಯೋಜನೆಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರು ಸಿದ್ಧಪಡಿಸಿರುತ್ತಾರೆ. ಆರಂಭಿಕವಾಗಿ ಈ ಕಾರ್ಯಕ್ರಮದಡಿ 2016-17ನೇ ಸಾಲಿನಲ್ಲಿ ರೂ.50.00 ಕೋಟಿ ಮೊತ್ತಕ್ಕೆ ರಸ್ತೆ ಸುರಕ್ಷತಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಓದಲಾದ 2 ರಲ್ಲಿ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದಲ್ಲಿ ಕಂಡಿಕೆ 5 ರಲ್ಲಿ ಕಾಮಗಾರಿಗಳನ್ನು ಪ್ಯಾಕೇಜ್ ಮಾಡಿ ಇ-ಟೆಂಡರ್ ಮೂಲಕ ಅನುಷ್ಠಾನಗೊಳಿಸಲು ಸೂಚಿಸಲಾಗಿದ್ದು, ಅದರ ಬದಲಾಗಿ ಪ್ರಸ್ತುತ ಜಾರಿಯಲ್ಲಿರುವ ಕೆ.ಟಿ.ಪಿ.ಪಿ. ನಿಯಮಗಳನ್ವಯ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ನೀಡಿದೆ. ಹಾಗೂ ಸದರಿ ಕಾಮಗಾರಿಗಳ ಬಿಲ್ ಪಾವತಿಗಾಗಿ ರೂ.50.00 ಕೋಟಿಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:52:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:0[illegible]-12-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಗ್ರಾಮೀಣ ರಸ್ತೆ ಪರಿಮಿತಿಯಲ್ಲಿ ಬರುವ ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ 2016-17ನೇ ಸಾಲಿನಲ್ಲಿ ರಸ್ತೆ ಸುರಕ್ಷತಾ ಕಾಮಗಾರಿಗಳ ಬಾಕಿ ಬಿಲ್ ಪಾವತಿಸಲು ಲೆಕ್ಕ ಶೀರ್ಷಿಕೆ 3054-04-337-1-12-059 ರಡಿ ರೂ.50.00 (ರೂಪಾಯಿ ಐವತ್ತು ಕೋಟಿಗಳು ಮಾತ್ರ) ಕೋಟಿಗಳಲ್ಲಿ ನಿಯಮಾನುಸಾರ ಅನುಷ್ಠಾನಗೊಳಿಸಲು ಅನುಬಂಧದಲ್ಲಿರುವಂತೆ ಕೆಳಕಂಡ ಷರತ್ತುಗಳಿಗೊಳಪಟ್ಟು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು**

1. ಈ ಅನುದಾನವನ್ನು ಜಿಲ್ಲಾ ಪಂಚಾಯತಿಗಳ ಅಧೀನದಲ್ಲಿರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮೂಲಕ ಅನುಷ್ಠಾನಗೊಳಿಸಿದ ಕಾಮಗಾರಿಗಳ ಬಿಲ್ ಪಾವತಿಗೆ ಮಾತ್ರ ವಿನಿಯೋಗಿಸತಕ್ಕದ್ದು.

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಈ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಮತ್ತು ಸರ್ಕಾರಕ್ಕೆ ಕಾಲಕಾಲಕ್ಕೆ ಪ್ರಗತಿಯ ವರದಿಯನ್ನು ನೀಡತಕ್ಕದ್ದು.

3. ಬಳಕೆಯಾದ ಹಣ ಹಾಗೂ ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಒದಗಿಸತಕ್ಕದ್ದು.

4. ಈ ಯೋಜನೆಯ ಎಲ್ಲಾ ಕಾಮಗಾರಿಗಳನ್ನು ಕೆಟಿಟಿಪಿ ನಿಯಮಾನುಸಾರ ಕೈಗೊಳ್ಳುವುದು. ಒಂದು ವೇಳೆ ರಸ್ತೆ ಸುರಕ್ಷಿತಾ ಕಾಮಗಾರಿಗಳನ್ನು ತುಂಡುಗುತ್ತಿಗೆ ಮೇಲೆ ಕೈಗೊಂಡಿದ್ದಲ್ಲಿ ಸದರಿ ಕಾಮಗಾರಿಗಳನ್ನು ನೊಂದಾಯಿತ ಗುತ್ತಿಗೆದಾರರಿಗೆ ನಿಯಮಾನುಸಾರ ಕಾಮಗಾರಿ ವಹಿಸಿಕೊಟ್ಟಿರುವುದನ್ನು ಖಚಿತಪಡಿಸಿಕೊಳ್ಳುವುದು.

5. ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿದ ಬಳಿಕ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿ ಮಾಡುವುದು ಕಡ್ಡಾಯವಾಗಿರುತ್ತದೆ.

6. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

7. ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ, ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ ಪ್ರಸ್ತುತ ಈ ಆದೇಶದಲ್ಲಿನ ಕಾರ್ಯಕ್ರಮದ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

8. ರಸ್ತೆ ಸುರಕ್ಷತೆ ಕಾಮಗಾರಿಗಳಿಂದ ಉಂಟಾಗಿರುವ ಪ್ರಯೋಜನದ ಕುರಿತು 3 ಹಂತದ ಛಾಯಾಚಿತ್ರ ಸಹಿತ ವರದಿಗಳನ್ನು ರಸ್ತೆ ಸುರಕ್ಷತಾ ಕೋಶದ ಮುಖೇನ ಮಾನ್ಯ ಸರ್ವೋಚ್ಛ ನ್ಯಾಯಾಲಯಕ್ಕೆ ಸಲ್ಲಿಸಬೇಕಾಗಿರುವ ಕಾರಣ, ವ್ಯವಸ್ಥಿತ ರೀತಿಯಲ್ಲಿ ದಾಖಲೀಕರಣ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/224/ವೆಚ್ಚ-6/2016, ದಿನಾಂಕ:20-5-2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಕಂಡಿಕೆ ಸಂಖ್ಯೆ: 659/ಪಿಬಿಎಸ್/2016 ದಿನಾಂಕ 30.11.2016 ರ ಮೇರೆಗೆ ಹೊರಡಿಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

9/12/16

(ಡಾ. ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.

2. ಮಹಾಲೇಖಪಾಲಕರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲಕರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು , ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
16. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
17. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
18. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
19. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
20. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
21. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ
22. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
23. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು).
24. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ರಸ್ತೆ ಸುರಕ್ಷತಾ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ

ಆದೇಶ ಸಂಖ್ಯೆ: ಗ್ರಾಅಪ/52/ಆರ್ಆರ್‌ಸಿ/2016 ದಿನಾಂಕ 09.12.2016 ರ ಲಗತ್ತು

(ರೂ.ಲಕ್ಷಗಳಲ್ಲಿ)

| ಕ್ರಸಂ | ಜಿಲ್ಲೆ | ರಸ್ತೆ ಉದ್ದ (ಕಿ.ಮೀ. ಗಳಲ್ಲಿ) | ಕಾಮಗಾರಿ ಗಳ ಸಂಖ್ಯೆ | ಅಂದಾಜು ಮೊತ್ತ | ಆದೇಶದಲ್ಲಿ ಬಿಡುಗಡೆ ಯಾದ ಮೊತ್ತ |
|---|---|---|---|---|---|
| 1 | ಬೆಂಗಳೂರು (ಗ್ರಾ) | 2872.98 | 36 | 114.62 | 114.62 |
| 2 | ರಾಮನಗರ | 2460.74 | 51 | 98.18 | 98.18 |
| 3 | ಬೆಂಗಳೂರು ನಗರ | 2041.30 | 28 | 81.44 | 81.44 |
| 4 | ಕೋಲಾರ | 4213.16 | 19 | 27.31 | 27.31 |
| 5 | ಚಿಕ್ಕಬಳ್ಳಾಪುರ | 3600.51 | 20 | 94.95 | 94.95 |
| 6 | ತುಮಕೂರು (ಮಧುಗಿರಿ) | 11786.92 | 28 | 470.28 | 470.28 |
| 7 | ಮೈಸೂರು (ಕೆ.ಆರ್.ನಗರ) | 6738.73 | 133 | 186.25 | 186.25 |
| 8 | ಚಾಮರಾಜನಗರ | 3039.15 | 110 | 121.26 | 121.26 |
| 9 | ಮಂಡ್ಯ | 7050.48 | 72 | 121.36 | 121.36 |
| 10 | ಹಾಸನ (ಚನ್ನರಾಯಪಟ್ಟಣ) | 8475.55 | 233 | 304.65 | 304.65 |
| 11 | ಬೆಳಗಾವಿ (ಚಿಕ್ಕೋಡಿ) | 11290.44 | 137 | 410.50 | 410.50 |
| 12 | ಬಾಗಲಕೋಟೆ | 5972.84 | 71 | 238.31 | 238.31 |
| 13 | ವಿಜಯಪುರ | 8552.15 | 5 | 22.00 | 22.00 |
| 14 | ಬಳ್ಳಾರಿ (ಹಡಗಲಿ) | 5295.00 | 73 | 118.60 | 118.60 |
| 15 | ರಾಯಚೂರು | 4678.59 | 60 | 82.88 | 82.88 |
| 16 | ಕೊಪ್ಪಳ | 3847.93 | 9 | 43.75 | 43.75 |
| 17 | ಕಲಬುರಗಿ | 6503.29 | 24 | 259.47 | 259.47 |
| 18 | ಯಾದಗಿರಿ | 2372.00 | 16 | 35.13 | 35.13 |
| 19 | ಬೀದರ್ | 3560.70 | 30 | 111.00 | 111.00 |
| 20 | ದಕ್ಷಿಣ ಕನ್ನಡ | 9157.75 | 113 | 302.80 | 302.80 |
| 21 | ಉಡುಪಿ | 6415.42 | 29 | 22.00 | 22.00 |
| 22 | ಚಿಕ್ಕಮಗಳೂರು | 6739.98 | 52 | 47.50 | 47.50 |
| 23 | ಕೊಡಗು | 4039.85 | 27 | 118.17 | 118.17 |
| 24 | ದಾವಣಗೆರೆ (ಹರಪ್ಪನಹಳ್ಳಿ) | 5372.69 | 91 | 214.37 | 214.37 |
| 25 | ಚಿತ್ರದುರ್ಗ | 6673.94 | 15 | 266.28 | 266.28 |
| 26 | ಶಿವಮೊಗ್ಗ (ಸಾಗರ) | 11613.64 | 110 | 463.37 | 463.37 |
| 27 | ಧಾರವಾಡ | 3748.69 | 30 | 109.50 | 109.50 |
| 28 | ಗದಗ | 4328.84 | 10 | 50.00 | 50.00 |
| 29 | ಹಾವೇರಿ | 3669.39 | 2 | 8.00 | 8.00 |
| 30 | ಉತ್ತರ ಕನ್ನಡ (ಕಾರವಾರ & ಶಿರಸಿ) | 11429.65 | 73 | 456.07 | 456.07 |
| | ಒಟ್ಟು | 177542.30 | 1707 | 5000.00 | 5000.00 |

9/12/16

(ಡಾ. ಬೂದಿನಹಳ್ಳಿ ನಾಗರಾಜ್)

ನಿರ್ದೇಶಕರು

ಸುವರ್ಣ ಗ್ರಾಮೋದಯ ಯೋಜನೆ ಹಾಗೂ

ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.